ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಗೋಮಾಳ ಜಮೀನಿನ ಅತಿಕ್ರಮಣದ ಕುರಿತು

ಶ್ರೀ ಮರಿತಿಬ್ಬೇಗೌಡ(ಶಿಕ್ಷಕರ ಕ್ಷೇತ್ರ) -

1052 (1132) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಮಂಡ್ಯ ಜಿಲ್ಲೆ, ನಾಗಮಂಗಲ ತಾಲ್ಲೂಕು, ಹೊಣಕೆರೆ ಹೋಬಳಿಯ ಮರಡಿಪುರ ಗ್ರಾಮ ಹಾಗೂ ಹೊಣಕೆರೆ ಹೋಬಳಿಯಲ್ಲಿ ಇರುವ ಗ್ರಾಮಗಳಲ್ಲಿ ಇರುವಂತಹ ಸರ್ಕಾರಿ ಗೋಮಾಳಗಳು ಎಷ್ಟು; (ಗ್ರಾಮಗಳವಾರು ಸಂಪೂರ್ಣ ಮಾಹಿತಿ ನೀಡುವುದು) ಮರಡಿಪುರ ಗ್ರಾಮದಲ್ಲಿರುವ ಶ್ರೀ ರಂಗನಾಥ ಸ್ವಾಮಿ ಬೆಟ್ಟ ಹಾಗೂ ಸುತ್ತಮುತ್ತಲಿನಲ್ಲಿರುವ ಗೋಮಾಳಗಳ ಎಷ್ಟು ಎಕರೆ ಜಾಗವಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಶ್ರೀ ರಂಗನಾಥ ಸ್ವಾಮಿ ಬೆಟ್ಟಕ್ಕೆ ಸೇರಿರುವ ಎಷ್ಟು ಜಾಗವಿದೆ ಹಾಗೂ ಬೆಟ್ಟದ ಪಕ್ಕದಲ್ಲಿರುವ ಗೋಮಾಳ ಎಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಶ್ರೀ ರಂಗನಾಥ ಸ್ವಾಮಿ ಬೆಟ್ಟದಲ್ಲಿ ಗೋಮಾಳವನ್ನು ಕೆಲವು ಜನರು ಉಪಯೋಗಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ; (ಗೋಮಾಳವನ್ನು ಉಪಯೋಗಿಸುತ್ತಿರುವ ರೈತರ ಹೆಸರು ವಿಳಾಸ ಹಾಗೂ ಅವರು ಗೋಮಾಳದಲ್ಲಿ ಬೆಳೆಯುತ್ತಿರುವ ಆಹಾರ ಪದಾರ್ಥಗಳ ಸಂಪೂರ್ಣ ಮಾಹಿತಿ ನೀಡುವುದು)

(ಈ) ಮರಡಿಪುರ ಗ್ರಾಮದಿಂದ ಕೆಂಪನಕೊಪ್ಪಲಿಗೆ ಹೋಗುವ ರಸ್ತೆಯನ್ನು ಸಂಪೂರ್ಣವಾಗಿ ರೈತರು ಉಪಯೋಗಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೆಂಪನಕೊಪ್ಪಲು ಗ್ರಾಮಕ್ಕೆ ಸಾರ್ವಜನಿಕರು ಹಾಗೂ ಎತ್ತಿನ ಬಂಡಿಗಳು ಹೋಗಲು ಈ ರಸ್ತೆಯನ್ನು ಯಾವಾಗ ತೆರವುಗೊಳಿಸಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು)